**ಸಾಕ್ಷಿಗೆ ದಿನಾಂಕ 09-02-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ ಹೆಚ್ ಎಸ್ ಕೆ ವಕೀಲರಿಂದಃ**

1. ನಾನು ನಾಗಮಂಗಲದ ಬಿ ಜಿ ನಗರದ ಆದಿಚುಂಚನಗಿರಿ ಆಸ್ಪತ್ರೆಯಲ್ಲಿ ಎಂ ಆರ್ ಓ ಆಗಿದ್ದು, ಅರ್ಜಿದಾರರ ಪರ ಸಾಕ್ಷಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ:

| | |
|---|---|
| ನಿ.ಪಿ.36 | ಅಧಿಕಾರ ಪತ್ರ |
| ನಿ.ಪಿ.37 | ಎಂ ಎಲ್ ಸಿ ಎಕ್ಸ್ ಟ್ರಾಕ್ಟ್ ನ ದೃಢೀಕೃತ ಪ್ರತಿ |
| ನಿ.ಪಿ.38 | ಪೊಲೀಸ್ ಇಂಟಿಮೇಷನ್ ನ ದೃಢೀಕೃತ ಪ್ರತಿ |
| ನಿ.ಪಿ.39 ರಿಂದ 41 | 3 ಕೇಸ್ ಶೀಟ್ ಗಳನ್ನು ಕ್ರಮವಾಗಿ |

**ಪಾಟೀ ಸವಾಲುಃ 2ನೇ ಎದುರುದಾರರ ಪರ ಶ್ರೀ ಎನ್ ಎಂ ಪಿ ವಕೀಲರಿಂದಃ**

1. ನಾನು ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇರುವುದಿಲ್ಲ. ನಿಪಿ.37 ಮತ್ತು 38 ರಲ್ಲಿ ಯಾವುದೇ ವಾಹನ ಸಂಖ್ಯೆ ನಮೂದಾಗಿರುವುದಿಲ್ಲ ಎಂದರೆ ಸರಿ. ಅರ್ಜಿದಾರರನ್ನು ಯಾರು ದಾಖಲಿಸಿರುತ್ತಾರೆ ಎಂದ ನಮೂದಾಗಿರುವುದಿಲ್ಲ ಎಂದರೆ ಸರಿ. ದಿಃ30.04.2024 ರಂದು ಅರ್ಜಿದಾರರು ಕೊನೆಯ ಬಾರಿಗೆ ಆಸ್ಪತ್ರೆಯಿಂದ ಬಿಡುಗಡೆಯೊಂದಿರುತ್ತಾರೆ.

ದಿ:**30.04.2024** ರ ನಂತರ ಅರ್ಜಿದಾರರು ನಮ್ಮ ಆಸ್ಪತ್ರೆಗೆ ಬಂದ ದಾಖಲೆಗಳು ಇರುವುದಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿ, ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 1 ನೇ ಎದುರುದಾರರು ಏಕ-ಪಕ್ಷೀಯ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**